ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**: 1413**
ಸದಸ್ಯರು ಹೆಸರು	**: ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
ಉತ್ತರಿಸಬೇಕಾದ ದಿನಾಂಕ	**: 18-03-2020**
ಉತ್ತರಿಸುವ ಸಚಿವರು	**: ಮಾನ್ಯ ಕಂದಾಯ ಸಚಿವರು**

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಪ್ರತಿದಿನವೂ ನಗರ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ತಾಲ್ಲೂಕು ಕಛೇರಿ ಕೆಲಸಕ್ಕೆ ಬರುತ್ತಿದ್ದು, ಅವರಿಗೆ ಸೂಕ್ತ ನಾಗರೀಕ ಸೌಲಭ್ಯ ಕಲ್ಪಿಸದೇ ಅನಾನುಕೂಲ ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ತಾಲ್ಲೂಕು ಕಛೇರಿಗೆ ಆಗಮಿಸುವ ಸಾರ್ವಜನಿಕರಿಗೆ ನಾಗರೀಕ ಸೌಲಭ್ಯವನ್ನು ಕಲ್ಪಿಸಲಾಗಿರುವುದರಿಂದ ಯಾವುದೇ ಅನಾನುಕೂಲಗಳು ಇರುವುದಿಲ್ಲ.
(ಆ)	ಚಾಮರಾಜನಗರ ತಾಲ್ಲೂಕು ಕಛೇರಿ ಬಳಿ, ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ, ಕುಳಿತುಕೊಳ್ಳಲು ಜಾಗ ಹಾಗೂ ಆಸನಗಳ ವ್ಯವಸ್ಥೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;	ಚಾಮರಾಜನಗರ ತಾಲ್ಲೂಕು ಕಛೇರಿಯಲ್ಲಿ ಸಾರ್ವಜನಿಕರಿಗೆ ಶೌಚಾಲಯ, ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆಯನ್ನು ಪಡಸಾಲೆಯಲ್ಲಿ ಕಲ್ಪಿಸಲಾಗಿದ್ದು, ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.
(ಇ)	ಈ ಬಗ್ಗೆ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಅಹವಾಲು ಸಲ್ಲಿಸಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಈ ವಿಷಯದ ಬಗ್ಗೆ ಚಾಮರಾಜನಗರ ಜಿಲ್ಲಾಧಿಕಾರಿ ಕಛೇರಿಯಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಅಹವಾಲುಗಳನ್ನು ಸಲ್ಲಿಸಿರುವುದಿಲ್ಲ.

ಕಂಇ 09 ವಿಮಕ 2020

(ಆರ್. ಅಶೋಕ)

ಕಂದಾಯ ಸಚಿವರು